# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 673

ವಿಧಾನ ಪರಿಷತ್ತು ಸದಸ್ಯರ ಹೆಸರು : ಶ್ರೀ ಎಂ. ನಾಗರಾಜು
(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 09.03.2026

ಉತ್ತರಿಸುವ ಸಚಿವರು : ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಇತ್ತೀಚಿನ ದಿನಗಳಲ್ಲಿ ನಡೆದ ತನಿಖೆಗಳ ಪ್ರಕಾರ, ರಾಜ್ಯದಲ್ಲಿ ಕೆಲವೊಂದು ನ್ಯಾಯಬೆಲೆ ಅಂಗಡಿಗಳು ಪಡಿತರ ಚೀಟಿದಾರರಿಂದ ಪಡಿತರ ಸರಬರಾಜು ಮಾಡಲು ರೂ.20ಗಳ ಪಾವತಿಗಳನ್ನು ಅಕ್ರಮವಾಗಿ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿರುತ್ತದೆ. |
| ಆ | ಬಂದಿದ್ದಲ್ಲಿ, ಸರ್ಕಾರ ಯಾವ ರೀತಿ ಕ್ರಮ ಕೈಗೊಂಡಿದೆ ಮತ್ತು ಇಂತಹ ನ್ಯಾಯಬೆಲೆ ಅಂಗಡಿಗಳ ಪರವಾನಗಿಯನ್ನು ರದ್ದುಪಡಿಸಲಾಗುತ್ತಿದೆಯೇ; | ಪಡಿತರ ವಿತರಣೆಯಲ್ಲಿ ಲೋಪವೆಸಗಿದ ನ್ಯಾಯಬೆಲೆ ಅಂಗಡಿಗಳ ವಿರುದ್ಧ ಕರ್ನಾಟಕ ಅಗತ್ಯ ವಸ್ತುಗಳ ಸಾರ್ವಜನಿಕ ವಿತರಣಾ ಪದ್ಧತಿ (ನಿಯಂತ್ರಣ) ಆದೇಶ 2016ರ ನಿಯಮಗಳು ಮತ್ತು ಪ್ರಾಧಿಕರಣ ಷರತ್ತುಗಳನ್ವಯ ಭದ್ರತಾ ಠೇವಣಿ ಮುಟ್ಟುಗೋಲು/ ದಂಡ/ಅಮಾನತ್ತು/ ರದ್ದುಪಡಿಸಲು ಕ್ರಮ ಕೈಗೊಳ್ಳಲಾಗಿದೆ. |
| ಇ | ಕರ್ನಾಟಕ ರಾಜ್ಯ ಆಹಾರ ನಿಗಮದಿಂದ ನಿರ್ವಹಿಸಲ್ಪಡುವ ಗೋದಾಮುಗಳಲ್ಲಿ ಆಹಾರ ದಾಸ್ತಾನುಗಳ ಕಳಪೆ ನಿರ್ವಹಣೆ, ದಾಖಲೆಗಳಲ್ಲಿನ ವ್ಯತ್ಯಾಸಗಳು ಮತ್ತು ಸರಿಯಾದ ತೂಕದ ವ್ಯವಸ್ಥೆಗಳ ಕೊರತೆ ಕುರಿತು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ದೋಷಗಳನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಬಂದಿರುವುದಿಲ್ಲ.<br>ಒಂದು ವೇಳೆ ಅಂತಹ ಪ್ರಕರಣಗಳು ಕಂಡು ಬಂದಲ್ಲಿ ಸಂಬಂಧಪಟ್ಟ ಸಗಟು ಮಳಿಗೆ ವ್ಯವಸ್ಥಾಪಕರು ಹಾಗೂ ಆಹಾರ ನಿರೀಕ್ಷಕರ ವಿರುದ್ಧ ಸೂಕ್ತ ಕ್ರಮ ಜರುಗಿಸಲಾಗುವುದು. |

ಇ- ಆನಾಸ 28 ಆನಾಸ 2026

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ
ಇಲಾಖಾ ಸಚಿವರು